# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-2009-10 ನೇ ಸಾಲಿನಲ್ಲಿ ದಾವಣಗೆರೆ ಜಿಲ್ಲಾ ಪಂಚಾಯತಿಯಲ್ಲಿ ಬಿ.ಆರ್.ಜಿ.ಎಫ್ ಯೋಜನೆಯಡಿಯಲ್ಲಿ ಅನುದಾನದ ಬಳಕೆಯಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯನ್ನು ನೇಮಿಸುವ ಬಗ್ಗೆ.

ಓದಲಾಗಿದೆ: 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ರವರ ಪತ್ರ ಸಂಖ್ಯೆ:ಜಿಪಂದಾ:(ಆ-2):ಸಿಸಿಎ:ಸಿಆರ್:23: 2013-14, ದಿನಾಂಕ :06-05-2014.

2. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 44 ವಿಸೇಜ 2014 ದಿ: 29-05-2015.

3. ಆಪಾದಿತ ಅಧಿಕಾರಿಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳು.

-----

ಪ್ರಸ್ತಾವನೆ:-

2009-10 ನೇ ಸಾಲಿನಲ್ಲಿ ದಾವಣಗೆರೆ ಜಿಲ್ಲಾ ಪಂಚಾಯತಿಯಲ್ಲಿ ಬಿ.ಆರ್.ಜಿ.ಎಫ್ ಯೋಜನೆಯಡಿಯಲ್ಲಿ ಅನುದಾನದ ಬಳಕೆಯಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿ /ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 06-05-2014 ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ರವರು ದೋಷಾರೋಪಣಾ ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಪ್ರಕರಣದಲ್ಲಿ ಈ ಕೆಳಕಂಡ ಅಧಿಕಾರಿ /ನೌಕರರುಗಳು ಭಾಗಿಯಾಗಿದ್ದಾರೆ.

1. ಶ್ರೀ ಗುತ್ತಿ ಜಂಬುನಾಥ್, ಹಿಂದಿನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿ.ಪಂ. ದಾವಣಗೆರೆ
2. ಶ್ರೀ ಜಿ.ಆರ್.ಓಂಕಾರಪ್ಪ, ಹಿಂದಿನ ಮುಖ್ಯ ಯೋಜನಾಧಿಕಾರಿ ಜಿ.ಪಂ. ದಾವಣಗೆರೆ
3. ಶ್ರೀ ಎಂ.ಎಸ್. ಜಯರಾಂ, ಹಿಂದಿನ ಮುಖ್ಯ ಲೆಕ್ಕಾಧಿಕಾರಿ ಜಿ.ಪಂ. ದಾವಣಗೆರೆ
4. ಶ್ರೀ ಎಲ್.ಎಸ್. ಪ್ರಭುದೇವ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ. ದಾವಣಗೆರೆ
5. ಶ್ರೀ ಸ್ವಾಮಿಲಿಂಗಪ್ಪ, ಹಿಂದಿನ ಗ್ರೇಡ್-1 ಕಾರ್ಯದರ್ಶಿ ಗ್ರಾಮ ಪಂಚಾಯತಿ ದೊಡ್ಡಬಾತಿ, ದಾವಣಗೆರೆ ತಾಲ್ಲೂಕು
6. ಶ್ರೀ ಬಿ.ನಾಗಪ್ಪ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಕಡ್ಲೇಬಾಳು, ದಾವಣಗೆರೆ ತಾಲ್ಲೂಕು
7. ಶ್ರೀ. ಓಂಕಾರಪ್ಪ ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಹೆಬಾಳು, ದಾವಣಗೆರೆ ತಾಲ್ಲೂಕು
8. ಶ್ರೀ ಚಳ್ಳ ಶಶಿಧರ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಗ್ರಾಮ ಪಂಚಾಯತಿ, ಅಣಜಿ, ದಾವಣಗೆರೆ ತಾಲ್ಲೂಕು
9. ಶ್ರೀಮತಿ ಸುರೇಖಾ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಬೆಳವನೂರು, ದಾವಣಗೆರೆ ತಾಲ್ಲೂಕು.
10. ಶ್ರೀಮತಿ ಐ.ಸಿ.ವಿದ್ಯಾವತಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ದೊಡ್ಡಬಾತಿ, ದಾವಣಗೆರೆ ತಾಲ್ಲೂಕು.
11. ಶ್ರೀಮತಿ ಸೌಭಾಗ್ಯಲಕ್ಷ್ಮಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಕಕ್ಕರಗೊಳ್ಳ, ದಾವಣಗೆರೆ ತಾಲ್ಲೂಕು.
12. ಶ್ರೀ ಶಿವಮೂರ್ತಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಹುಲಿಕಟ್ಟೆ, ದಾವಣಗೆರೆ ತಾಲ್ಲೂಕು.
13. ಶ್ರೀ ಬಿ.ಎಸ್.ಆನಂದಪ್ಪ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಅಣಬೇರು, ದಾವಣಗೆರೆ ತಾಲ್ಲೂಕು.
14. ಶ್ರೀ ಹೆಚ್.ಹೆಚ್. ಪಾಟೀಲ್, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಅತ್ತಿಗೆರೆ, ದಾವಣಗೆರೆ ತಾಲ್ಲೂಕು.
15. ಶ್ರೀ ಕೃಷ್ಣಮೂರ್ತಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ನರಗನಹಳ್ಳಿ, ದಾವಣಗೆರೆ ತಾಲ್ಲೂಕು.
16. ಶ್ರೀ ತಿಪ್ಪೇಸ್ವಾಮಿ, ಹಿಂದಿನ ಗ್ರೇಡ್-2, ಕಾರ್ಯದರ್ಶಿ ಗ್ರಾಮ ಪಂಚಾಯತಿ, ಕಂದನಕೋವಿ ದಾವಣಗೆರೆ ತಾಲ್ಲೂಕು.

17. ಶ್ರೀ ಚಂದನಕುಮಾರ್, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ.ನವಿಲೇಹಳ್. ಚೆನ್ನಗಿರಿ. ತಾಲ್ಲೂಕು.

ಇವರುಗಳು ಎಸಗಿರುವ ಕರ್ತವ್ಯಲೋಪಗಳ/ದುರ್ನಡತೆಗಳ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರಡಿ ಶಿಸ್ತು ಕ್ರಮ ಜರುಗಿಸಲು ಉದ್ದೇಶಿಸಿ, ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯ ಅನುಬಂಧ 1 ರಿಂದ 4 ನ್ನು ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಜಾರಿ ಮಾಡಲಾಗಿತ್ತು. ಸದರಿ ನೋಟೀಸಿಗೆ ಮೇಲ್ಕಂಡ ಕ್ರ.ಸಂ.1 ರಿಂದ 4ರ ಆಪಾದಿತ ಅಧಿಕಾರಿಗಳು ಮೇಲೆ ಓದಲಾದ ಕ್ರಮಸಂಖ್ಯೆ (3) ರಲ್ಲಿ ಲಿಖಿತ ಹೇಳಿಕೆಗಳನ್ನು ಸಲ್ಲಿಸಿ ಅವರ ವಿರುದ್ಧದ ಆರೋಪವನ್ನು ನಿರಾಕರಿಸಿ ಆರೋಪಗಳನ್ನು ಕೈಬಿಡಲು ಕೋರಿರುತ್ತಾರೆ. ಉಳಿದ ಅಪಾದಿತರುಗಳು ಈವರೆಗೆ ಲಿಖಿತ ಹೇಳಿಕೆಗಳನ್ನು ಸಲ್ಲಿಸದೆ ಇರುವುದರಿಂದ ಅವರುಗಳ ವಿವರಣೆಗಳು ಏನು ಇಲ್ಲವೆಂದು ನಿಯಮಾನುಸಾರ ಪರಿಗಣಿಸಿ, ಮೇಲ್ಕಂಡ ಎಲ್ಲ ಅಪಾದಿತ ಅಧಿಕಾರಿ/ನೌಕರರುಗಳ ವಿರುದ್ಧದ ಆರೋಪಗಳ ಸತ್ಯಾಸತ್ಯತೆಯನ್ನು ತಿಳಿಯಲು ಜಂಟಿ ಇಲಾಖಾ ವಿಚಾರಣೆಯನ್ನು ನಡೆಸಲು ಸರ್ಕಾರವು ನಿರ್ಧರಿಸಿ ಕೆಳಗಿನಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 44 ವಿಸೇಬಿ 2014 ದಿನಾಂಕ: 11-12-2015.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, 2009-10 ನೇ ಸಾಲಿನಲ್ಲಿ ದಾವಣಗೆರೆ ಜಿಲ್ಲಾ ಪಂಚಾಯತಿಯಲ್ಲಿ ಬಿ.ಆರ್.ಜಿ.ಎಫ್ ಯೋಜನೆಯಡಿಯಲ್ಲಿ ಅನುದಾನದ ಬಳಕೆಯಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವ ಈ ಕೆಳಕಂಡ ಅಧಿಕಾರಿ/ನೌಕರರುಗಳಾದ:-

1. ಶ್ರೀ ಗುತ್ತಿ ಜಂಬುನಾಥ್, ಹಿಂದಿನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿ.ಪಂ. ದಾವಣಗೆರೆ
2. ಶ್ರೀ ಜಿ.ಆರ್.ಓಂಕಾರಪ್ಪ, ಹಿಂದಿನ ಮುಖ್ಯ ಯೋಜನಾಧಿಕಾರಿ ಜಿ.ಪಂ. ದಾವಣಗೆರ
3. ಶ್ರೀ ಎಂ.ಎಸ್. ಜಯರಾಂ, ಹಿಂದಿನ ಮುಖ್ಯ ಲೆಕ್ಕಾಧಿಕಾರಿ ಜಿ.ಪಂ. ದಾವಣಗೆರೆ
4. ಶ್ರೀ ಎಲ್.ಎಸ್. ಪ್ರಭುದೇವ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾ.ಪಂ. ದಾವಣಗೆರೆ
5. ಶ್ರೀ ಸ್ವಾಮಿಲಿಂಗಪ್ಪ, ಹಿಂದಿನ ಗ್ರೇಡ್-1 ಕಾರ್ಯದರ್ಶಿ, ಗ್ರಾಮ ಪಂಚಾಯತಿ ದೊಡ್ಡಬಾತಿ, ದಾವಣಗೆರೆ ತಾಲ್ಲೂಕು
6. ಶ್ರೀ ಬಿ.ನಾಗಪ್ಪ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಕಡ್ಲೆಬಾಳು, ದಾವಣಗೆರೆ ತಾಲ್ಲೂಕು
7. ಶ್ರೀ. ಓಂಕಾರಪ್ಪ ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಹೆಬಾಳು, ದಾವಣಗೆರೆ ತಾಲ್ಲೂಕು
8. ಶ್ರೀ ಬಳ್ಳಿ ಶಶಿಧರ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಗ್ರಾಮ ಪಂಚಾಯತಿ, ಅಣಜಿ, ದಾವಣಗೆರೆ ತಾಲ್ಲೂಕು
9. ಶ್ರೀಮತಿ ಸುರೇಖಾ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಬೆಳವನೂರು, ದಾವಣಗೆರೆ ತಾಲ್ಲೂಕು.
10. ಶ್ರೀಮತಿ ಬಿ.ಸಿ.ವಿದ್ಯಾವತಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ದೊಡ್ಡಬಾತಿ. ದಾವಣಗೆರೆ ತಾಲ್ಲೂಕು.
11. ಶ್ರೀಮತಿ ಸೌಭಾಗ್ಯಲಕ್ಷ್ಮಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಕಕ್ಕರಗೊಳ್ಳ, ದಾವಣಗೆರೆ ತಾಲ್ಲೂಕು.
12. ಶ್ರೀ ಶಿವಮೂರ್ತಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಹುಲಿಕಟ್ಟೆ, ದಾವಣಗೆರೆ ತಾಲ್ಲೂಕು.
13. ಶ್ರೀ ಬಿ.ಎಸ್.ಆನಂದಪ್ಪ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಅಣಬೇರು. ದಾವಣಗೆರೆ ತಾಲ್ಲೂಕು.
14. ಶ್ರೀ ಹೆಚ್.ಹೆಚ್. ಪಾಟೀಲ್, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಅತ್ತಿಗೆರೆ. ದಾವಣಗೆರೆ ತಾಲ್ಲೂಕು.
15. ಶ್ರೀ ಕೃಷ್ಣಮೂರ್ತಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ನರಗನಹಳ್ಳಿ, ದಾವಣಗೆರೆ ತಾಲ್ಲೂಕು.
16. ಶ್ರೀ ತಿಪ್ಪೇಸ್ವಾಮಿ, ಹಿಂದಿನ ಗ್ರೇಡ್-2, ಕಾರ್ಯದರ್ಶಿ ಗ್ರಾಮ ಪಂಚಾಯತಿ ಕಂದನಕೋವಿ ದಾವಣಗೆರೆ ತಾಲ್ಲೂಕು.

17. ಶ್ರೀ ಚಂದನಕುಮಾರ್, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ನವಿಲೇಹಳ್, ಚೆನ್ನಗಿರಿತಾಲ್ಲೂಕು.

ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅನುಸಾರ ಮತ್ತು ಸದರಿ ನಿಯಮಗಳ ನಿಯಮ 13 ರಡಿಯಲ್ಲಿ ಜಂಟಿ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು, ಅದೇ ನಿಯಮಾವಳಿಗಳ ನಿಯಮ 11(2) ರ ಪ್ರಕಾರ ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಬೆಂಗಳೂರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಶಿಸ್ತು ಪ್ರಾಧಿಕಾರಿಯ ಪರವಾಗಿ ಪ್ರಕರಣವನ್ನು ವಿಚಾರಣಾಧಿಕಾರಿಯವರ ಮುಂದೆ ಮಂಡಿಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11(5)(ಸಿ) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸಹಾಯಕ ಕಾರ್ಯದರ್ಶಿ ಜಿಲ್ಲಾ ಪಂಚಾಯತಿ, ದಾವಣಗೆರೆ ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿದೆ.

ವಿಚಾರಣಾಧಿಕಾರಿಯವರು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಿ ಪ್ರತಿಯೊಬ್ಬ ಆಪಾದಿತರ ಪ್ರತಿಯೊಂದು ಆರೋಪವು ಸಾಬೀತಾಗಿರುವ ಅಥವಾ ಸಾಬೀತಾಗಿಲ್ಲದಿರುವ ಬಗ್ಗೆ ತಮ್ಮ ಸ್ಪಷ್ಟ ಅಭಿಪ್ರಾಯದೊಂದಿಗೆ ವಿಚಾರಣಾ ವರದಿಯನ್ನು 3 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳಿಗೆ ಸೂಕ್ತ ಸ್ಥಳಾವಕಾಶ, ಶೀಘ್ರಲಿಪಿಗಾರರ ಸೇವೆ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು(ಗ್ರಾ) ಇವರು ಕ್ರಮ ವಹಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/45/ ಸೇಇವಿ/2014 ದಿನಾಂಕ: 08-01-2015 ರನ್ವಯ ವಾಹನ ಭತ್ಯೆಯೂ ಸೇರಿದಂತೆ ರೂ. 25,000/- ಗಳ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ. ಹನುಮಂತಯ್ಯ).
ಸರ್ಕಾರದ ಅಧೀನ ಕಾರ್ಯದರ್ಶಿ(ಸೇ-ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ- ವಿಧಾನಸೌಧ / ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ./ ಯೋಜನೆ ,ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ/ ಬೆಂಗಳೂರು(ಗ್ರಾ)
4. ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಮತ್ತು ವಿಚಾರಣಾಧಿಕಾರಿಗಳು, ಮನೆ ನಂ. 1242, 4ನೇ ಮುಖ್ಯ ರಸ್ತೆ, 8ನೇ ಕ್ರಾಸ್, ಚಂದ್ರಾಲೇಔಟ್, ಬೆಂಗಳೂರು-40.
5. ಸರ್ಕಾರದ ಅದೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ,(ಆ) -ವಿಧಾನಸೌಧ / ಲೋಕೋಪಯೋಗಿ ಇಲಾಖೆ- ಸೇವೆಗಳು-ಎ) ವಿಕಾಸ ಸೌಧ./ ಯೋಜನೆ , ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ(ಎಸ್-5), ಬಹುಮಹಡಿ, ಕಟ್ಟಡ, ಬೆಂಗಳೂರು
6. ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತಿ, ದಾವಣಗೆರೆ (ಮಂಡನಾಧಿಕಾರಿ).
7. ಸಂಬಂಧಿಸಿದ ಅಧಿಕಾರಿ/ನೌಕರರುಗಳಿಗೆ. (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರ ಮುಖಾಂತರ.)



GO

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
2. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
3. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.

GO